**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಇಎಸ್‌ಐಸಿ ಆಸ್ಪತ್ರೆ, ಇಂದಿರಾನಗರ, ಬೆಂಗಳೂರು ಇಲ್ಲಿ ಬಿ.ಎಸ್ಸಿ., ನರ್ಸಿಂಗ್ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡುವ ಬಗ್ಗೆ.

---

**ಓದಲಾಗಿದೆ:**

ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:AFF/FNS-ESIC/BLORE/2013-14, ದಿನಾಂಕ 15.12.2012.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದ ಮುಖಾಂತರ ರಿಜಿಸ್ಟ್ರಾರ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಇಎಸ್‌ಐಸಿ ಆಸ್ಪತ್ರೆ, ಇಂದಿರಾನಗರ, ಬೆಂಗಳೂರು ಇಲ್ಲಿ ಬಿ.ಎಸ್ಸಿ., ನರ್ಸಿಂಗ್ ಕೋರ್ಸನ್ನು 100 (ನೂರು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಗಾಗಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994 ರ ಕಲಂ 45 (2) ರಡಿ ಸಲ್ಲಿಸಿದ್ದ ಅರ್ಜಿಯನ್ನು, ಸ್ಥಳೀಯ ತಪಾಸಣಾ ಸಮಿತಿಯ ವರದಿಯನ್ನು, ಅಕಾಡೆಮಿಕ್ ಕೌನ್ಸಿಲ್ ಮತ್ತು ಸಿಂಡಿಕೇಟ್ ನಿರ್ಣಯವನ್ನು ಸಲ್ಲಿಸುತ್ತಾ, ಇಎಸ್‌ಐಸಿ ಆಸ್ಪತ್ರೆಯಲ್ಲಿ ಬಿ.ಎಸ್ಸಿ., ನರ್ಸಿಂಗ್ ಕೋರ್ಸನ್ನು 100 (ನೂರು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ 2013-14 ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾವನೆಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಇಎಸ್‌ಐಸಿ ಆಸ್ಪತ್ರೆ, ಇಂದಿರಾನಗರ, ಬೆಂಗಳೂರು ಇಲ್ಲಿ 2013-14 ನೇ ಸಾಲಿನಿಂದ ಬಿ.ಎಸ್ಸಿ., ನರ್ಸಿಂಗ್ ಕೋರ್ಸನ್ನು 100 (ನೂರು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಯನ್ನು ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 325 ಎಂಎಂಇ 2012, ಬೆಂಗಳೂರು, ದಿನಾಂಕ 28.12.2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994 ರ ಕಲಂ 45 (5) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಇಎಸ್‌ಐಸಿ ಆಸ್ಪತ್ರೆ, ಇಂದಿರಾನಗರ, ಬೆಂಗಳೂರು ಇಲ್ಲಿ 2013-14 ನೇ ಸಾಲಿನಿಂದ ಬಿ.ಎಸ್ಸಿ., ನರ್ಸಿಂಗ್ ಕೋರ್ಸನ್ನು 100 (ನೂರು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಸಂಯೋಜನೆ ನೀಡಲು ಸರ್ಕಾರವು ಶಿಫಾರಸ್ಸು ಮಾಡಿದೆ.

**ಷರತ್ತು ಮತ್ತು ನಿಬಂಧನೆಗಳು**

1. ಇಎಸ್‌ಐಸಿ ಆಸ್ಪತ್ರೆ, ಇಂದಿರಾನಗರ, ಬೆಂಗಳೂರು ಇಲ್ಲಿ ಬಿ.ಎಸ್ಸಿ., ನರ್ಸಿಂಗ್ ಕೋರ್ಸಿನ ಶೇ.50 ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.
2. ಮೇಲ್ಕಂಡ ನರ್ಸಿಂಗ್ ಕೋರ್ಸಿನ ಸಂಯೋಜನೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಂಜೂರಾತಿಯನ್ನು ಪಡೆಯತಕ್ಕದ್ದು.
3. 1947 ರ ಭಾರತೀಯ ನರ್ಸಿಂಗ್ ಕೌನ್ಸಿಲ್ ಅಧಿನಿಯಮ 13 ನೇ ಪ್ರಕರಣದಲ್ಲಿ ಭಾರತೀಯ ಶುಶ್ರೂಷಾ ಪರಿಷತ್ತಿನ ಅನುಮೋದನೆಯನ್ನು ಪಡೆಯತಕ್ಕದ್ದು ಮತ್ತು ಭಾರತೀಯ ನರ್ಸಿಂಗ್ ಪರಿಷತ್ತು ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು ಮತ್ತು ಭಾರತೀಯ ಶುಶ್ರೂಷಾ ಪರಿಷತ್ತು ನಿಗದಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಹೊಂದತಕ್ಕದ್ದು.

.2

4. ಭಾರತೀಯ ಶುಶ್ರೂಷಾ ಪರಿಷತ್ತಿನ ಅನುಮೋದನೆಯನ್ನು 1947 ರ ಭಾರತೀಯ ನರ್ಸಿಂಗ್ ಕೌನ್ಸಿಲ್ ಅಧಿನಿಯಮದ 13 ನೇ ಪ್ರಕರಣದಡಿ ಪಡೆದ ನಂತರವೇ ನಿಗದಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು. ಯಾವುದೇ ಕಾರಣಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದ್ದಲ್ಲಿ 1991 ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ, ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.
5. ಭಾರತೀಯ ಶುಶ್ರೂಷಾ ಪರಿಷತ್ತು, ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು ಮತ್ತು ರಾಜ್ಯ ಸರ್ಕಾರ ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
6. ಭಾರತೀಯ ಶುಶ್ರೂಷಾ ಪರಿಷತ್ತಿನ ಮಾರ್ಗಸೂಚಿ ಪ್ರಕಾರ ಸ್ವಂತ ಆಸ್ಪತ್ರೆಯನ್ನು 05 ವರ್ಷಗಳ ಕಾಲಮಿತಿಯಲ್ಲಿ ಹೊಂದತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.
7. ವಿದ್ಯಾರ್ಥಿಗಳ ಪ್ರವೇಶವನ್ನು 2003 ರ ಕರ್ನಾಟಕ ನರ್ಸಿಂಗ್, ಫಾರ್ಮಸಿ ಮತ್ತು ಫಿಜಿಯೋಥೆರಪಿ ಕೋರ್ಸುಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲಕಾಲಕ್ಕೆ ಬಿ.ಎಸ್ಸಿ., ನರ್ಸಿಂಗ್ ಕೋರ್ಸಿನ ಪ್ರವೇಶಕ್ಕೆ ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಟ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.
8. ಮೇಲ್ಕಂಡ ಸಂಸ್ಥೆಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.
9. ಮೇಲ್ಕಂಡ ಯಾವುದೇ ಷರತ್ತನ್ನು ಕಾಲೇಜು ಉಲ್ಲಂಘಿಸಿದಲ್ಲಿ, 1994 ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 48 ನೇ ಪ್ರಕರಣದಲ್ಲಿ ಪ್ರಸ್ತುತ ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Mahaboobkhan
(ಮಹಬೂಬ್ ಖಾನ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

ಇವರಿಗೆ:

1. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, 4ನೇ ಟಿ ಬ್ಲಾಕ್, ಬೆಂಗಳೂರು -560041.
2. ರಿಜಿಸ್ಟ್ರಾರ್, ಭಾರತೀಯ ನರ್ಸಿಂಗ್ ಪರಿಷತ್ತು, ಕೋಟ್ಲಾ ರಸ್ತೆ, ನವದೆಹಲಿ-110001.
3. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
4. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
5. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ನರ್ಸಿಂಗ್ ಕೌನ್ಸಿಲ್, ಸೂರ್ಯ ಅಪಾರ್ಟ್‌ಮೆಂಟ್ಸ್, ಗಾಂಧಿನಗರ, ಬೆಂಗಳೂರು - 560009.
6. ಡೀನ್, ಇಎಸ್ಐಸಿ ವೈದ್ಯಕೀಯ ಕಾಲೇಜು ಮತ್ತು ಪಿಜಿಐಎಂಎಸ್ಆರ್, ಎಸ್ಐಸಿ ಆಸ್ಪತ್ರೆ, ರಾಜಾಜಿನಗರ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ವಿಕಾನ ಸೌಧ, ಬೆಂಗಳೂರು.